# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಾವೇರಿ ಜಿಲ್ಲಾ ಪಂಚಾಯತ್ ನೂತನ ಆಡಳಿತ ಕಛೇರಿ ಕಟ್ಟಡ ನಿರ್ಮಾಣ ಕಾಮಗಾರಿಯ ಪರಿಷ್ಕೃತ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** 1)ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ:ಗ್ರಾಅಪ:98: ಪಿಬಿಎಸ್: 2017 ದಿನಾಂಕ:13-03-2017.

2)ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತ್ ರವರ ಪತ್ರ ಸಂ.ಹಾಜಿಪಂ/ ಅಭಿ-3/ ಜಿ.ಪಂ. ಕಟ್ಟಡ/ವಹಿ-3847/2016-17 ದಿನಾಂಕ: 23-02-2017.

****

ಮೇಲೆ ಓದಲಾದ ಕ್ರಮಸಂಖ್ಯೆ(2)ರ ಹಾವೇರಿ ಜಿಲ್ಲಾ ಪಂಚಾಯತ್ ಪ್ರಸ್ತಾವನೆಯಲ್ಲಿ ನೂತನ ಆಡಳಿತ ಕಛೇರಿ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪರಿಷ್ಕೃತ ಅಂದಾಜು ಮೊತ್ತ ರೂ.430.00 ಲಕ್ಷಗಳ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.

ಸದರಿ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:35:ರಸ್ತೆ:2014 ಬೆಂಗಳೂರು ದಿನಾಂಕ:31-12-2014 ರಲ್ಲಿ ರೂ.300.00 ಲಕ್ಷಗಳಿಗೆ ಅನುಮೋದನೆ ಪಡೆದು ಇ-ಟೆಂಡರ್ ಕರೆದು ಗುತ್ತಿಗೆದಾರರ ಮೂಲಕ ಕಾಮಗಾರಿ ಪ್ರಾರಂಭಿಸಿರುವುದಾಗಿ ತಿಳಿಸಿರುತ್ತಾರೆ. ಕಾಮಗಾರಿಯ ಪ್ರಗತಿಯನ್ನು ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ ರವರು ಎರಡು ಬಾರಿ ಸ್ಥಳ ಪರಿಶೀಲನೆ ನಡೆಸಿ ಮೂಲ ಅಂದಾಜಿನಲ್ಲಿನ ಐಟಂಗಳಲ್ಲಿ ಕೆಲವೊಂದು ಸೇರ್ಪಡೆ ಮತ್ತು ಮಾರ್ಪಾಡುಗಳನ್ನು ಮಾಡಲು ಸೂಚಿಸಿದ್ದರ ಮೇರೆಗೆ ರೂ.130.00 ಲಕ್ಷಕ್ಕೆ work slip ಹಾಗೂ EIRL ತಯಾರಿಸಿದ್ದು ಹೆಚ್ಚುವರಿ ರೂ.130.00 ಲಕ್ಷ ಸೇರಿಸಿಕೊಂಡು ಒಟ್ಟು ರೂ.430.00 ಲಕ್ಷದ ಪರಿಷ್ಕೃತ ಅಂದಾಜು ಪಟ್ಟಿಯನ್ನು ತಯಾರಿಸಿ ಕಾರ್ಯನಿರ್ವಾಹಕ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗ,ಹಾವೇರಿ ರವರು ಕೋರಿರುವುದಾಗಿ

ತಿಳಿಸಿರುತ್ತಾರೆ. ಸದರಿ ಕಾಮಗಾರಿಗೆ ಅನುದಾನವನ್ನು ಜಿಲ್ಲಾ ಪಂಚಾಯತ್ ಕಛೇರಿ ಕಟ್ಟಡ ನಿರ್ಮಾಣ ಮತ್ತು ನಿರ್ವಹಣೆ ಲೆಕ್ಕಶೀರ್ಷಿಕೆ **2515–00–101–0–29** ರಡಿ ಅಳವಡಿಸಿಕೊಳ್ಳುವುದಾಗಿ ತಿಳಿಸಿರುತ್ತಾರೆ.

ಈ ಸಂಬಂಧ ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಹಾವೇರಿ ಜಿಲ್ಲಾ ಪಂಚಾಯತ್‌ನ ನೂತನ ಆಡಳಿತ ಕಛೇರಿ ಕಟ್ಟಡದ ಮೂಲ ಅಂದಾಜು ರೂ.300.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಹೆಚ್ಚುವರಿಯಾಗಿ ರೂ.130.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 8 ಟಿಎಫ್‌ಪಿ 2015 ದಿನಾಂಕ: 14–01–2016 ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಮೂಲ ಅಂದಾಜಿನ ಶೇ.25ರಷ್ಟು ಅಥವಾ ರೂ.300.00 ಲಕ್ಷಗಳು ಇದರಲ್ಲಿ ಯಾವುದು ಕಡಿಮೆಯೋ ಅದಕ್ಕೆ ಆಡಳಿತಾತ್ಮಕ ಪ್ರತ್ಯಾಯೋಜನೆಯ ಪರಿಮಿತಿ ಇರುವುದರಿಂದ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಬಹುದಾಗಿದೆ. ಎಂದು ಆಂತರಿಕ ಆರ್ಥಿಕ ಸಲಹೆಗಾರರು ತಿಳಿಸಿರುತ್ತಾರೆ.

ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ.ಗ್ರಾಅಪ.13.ಗ್ರಾಮೂಸೌ.2017 ಬೆಂಗಳೂರು, ದಿನಾಂಕ:16–03–2017.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ಹಾವೇರಿ ಜಿಲ್ಲಾ ಪಂಚಾಯತ್‌ನ ನೂತನ ಆಡಳಿತ ಕಛೇರಿ ಕಟ್ಟಡ ನಿರ್ಮಾಣ ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತ ರೂ.**430.00** ಲಕ್ಷಗಳ ಬದಲಿಗೆ ಈಗಾಗಲೇ ಆಡಳಿತಾತ್ಮಕ ಅನುಮೋದನೆ ಪಡೆದಿರುವ ರೂ.**300.00** ಲಕ್ಷಗಳಿಗೆ ಹೆಚ್ಚುವರಿಯಾಗಿ ಶೇ.**25**ರಷ್ಟು ಮಿತಿಗೊಳಪಟ್ಟು ಅಂದರೆ **ರೂ.375.00** ಲಕ್ಷಗಳ **(ರೂ.ಮೂರು ನೂರ ಎಪ್ಪತ್ತೈದು ಲಕ್ಷಗಳು ಮಾತ್ರ)** ಮಿತಿಗೊಳಪಟ್ಟು ಪರಿಷ್ಕೃತ ಅಂದಾಜು ಪಟ್ಟಿಗೆ ಈ ಕೆಳಕಂಡ ಷರತ್ತಿನಂತೆ ಆಡಳಿತಾತ್ಮಕ ಅನುಮೋದನೆ ನೀಡಿದೆ:

**ಷರತ್ತುಗಳು:–**

1. ಈ ಆದೇಶದಲ್ಲಿ ಅನುಮೋದಿಸಿರುವ ಕಟ್ಟಡ ಕಾಮಗಾರಿಯು ಜಿಲ್ಲಾ ಪಂಚಾಯತ್‌ನ ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆಯಾಗಿರುವುದಿಲ್ಲವೆಂಬ ಅಂಶವನ್ನು ಧೃಡಪಡಿಸಿಕೊಳ್ಳತಕ್ಕದ್ದು.

2. ಸದರಿ ಕಾಮಗಾರಿಯ ಪರಿಷ್ಕೃತ ಅಂದಾಜುಪಟ್ಟಿಗೆ ಸಕ್ಷಮ ತಾಂತ್ರಿಕ ಪ್ರಾಧಿಕಾರವಾದ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಂದ ನಿಯಮಾನುಸಾರ ಪ್ರಸ್ತಾವನೆಗೆ ಅನುಮೋದನೆ ಪಡೆದುಕೊಂಡು ಸರ್ಕಾರಕ್ಕೆ ಸಲ್ಲಿಸುವುದು.

3. ಕಾಮಗಾರಿಯ ಅನುಷ್ಠಾನವನ್ನು KTPP ನಿಯಮಗಳನ್ವಯ ಕೈಗೊಳ್ಳುವುದು.

4. ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುವಾಗ ಹಾಗೂ ಮುಕ್ತಾಯದ ತರುವಾಯ ಕಟ್ಟಡದ ಛಾಯಾಚಿತ್ರಗಳನ್ನು ತೆಗೆದು **"ಗಾಂಧಿ ಸಾಕ್ಷಿ ಕಾಯಕ "** ದಲ್ಲಿ ಕಡ್ಡಾಯವಾಗಿ ಅಳವಡಿಸಿದ ನಂತರವೇ ಬಿಲ್ಲುಗಳನ್ನು ಪಾವತಿಸುವುದು.

5. ಕಾಮಗಾರಿಯ ಗುಣಮಟ್ಟ ಪರೀಕ್ಷೆಯನ್ನು ಜಿಲ್ಲಾ ಪಂಚಾಯತಿಯ ಗುಣನಿಯಂತ್ರಣ ವಿಭಾಗದಿಂದ ಪರಿವೀಕ್ಷಣೆ ಮಾಡಿಸಿ ಸರ್ಕಾರಕ್ಕೆ ಕಾಲಕಾಲಕ್ಕೆ ವರದಿ ಸಲ್ಲಿಸಬೇಕು.

6. ಈ ಆದೇಶದಂತೆ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿದ ಕಾಮಗಾರಿಯ ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಇವರ ಮುಖಾಂತರ ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಟಿಪ್ಪಣಿ **ಸಂ.ಗ್ರಾಅಪ/98/ಪಿಬಿಎಸ್/2017 ದಿನಾಂಕ: 13-03-2017** ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ಕೃಷ್ಣಪ್ಪ)
ನಿರ್ದೇಶಕರು(ಗ್ರಾ.ಮೂ.ಸೌ-2) ಹಾಗೂ
ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
panchayat.build@gmail.com Ph.No.080-22343509

**ಇವರಿಗೆ:-**

1.ಮಹಾಲೇಖಪಾಲರು(ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು
2.ಮಹಾಲೇಖಪಾಲರು(ಆಡಿಟ್-1), ಕರ್ನಾಟಕ, ಬೆಂಗಳೂರು
3.ಮಹಾಲೇಖಪಾಲರು(ಆಡಿಟ್-2), ಕರ್ನಾಟಕ, ಬೆಂಗಳೂರು

**ಪ್ರತಿಯನ್ನು ಮಾಹಿತಿ/ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ:-**

1. ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿಗಳು, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು

2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ಪಿಎಂಯು)(ಐಎಫ್), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು
7. ವಿಶೇಷಾಧಿಕಾರಿಗಳು(ಜಿಲ್ಲಾ ಪಂಚಾಯತ್) ಮತ್ತು ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ
10. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು-560 001.
11. ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ
12. ಕಾರ್ಯನಿರ್ವಾಹಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾವೇರಿ
13. ಜಿಲ್ಲಾ ಖಜಾನಾಧಿಕಾರಿಗಳು, ಹಾವೇರಿ
14. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
15. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
16. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6 (ಜಿಲ್ಲಾ ಪಂಚಾಯತ್), ಆರ್ಥಿಕ ಇಲಾಖೆ, ಬೆಂಗಳೂರು
17. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು)
18. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು